# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂ. | 519(534) |
| ಮಾನ್ಯ ಸದಸ್ಯರ ಹೆಸರು | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 14-08-2025 |

***

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರು ಆರ್ಥಿಕವಾಗಿ ಸ್ವಾವಲಂಬನೆ ಹೊಂದಲು ರಾಜ್ಯದ ಕಾಮಗಾರಿ ಹಾಗೂ ಸಹಕಾರಿ ಕ್ಷೇತ್ರದಲ್ಲಿ ಅವಕಾಶ ಕಲ್ಪಿಸಿರುವಂತೆ ಅಬಕಾರಿ ಪರವಾನಗಿಯಲ್ಲಿಯೂ ಮೀಸಲಾತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: | ಪ್ರಸ್ತುತ ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಆ) | ಈ ಸಂಬಂಧ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕಲ್ಯಾಣ ಸಮಿತಿ ಅಬಕಾರಿ ಲೈಸನ್ಸ್‌ನಲ್ಲಿ ಶೆ.25 ರಷ್ಟು ಮೀಸಲಾತಿ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವುದು ನಿಜವೇ? | ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು 2013-14 ನೇ ಸಾಲಿನ ವರದಿಯಲ್ಲಿ ಅಬಕಾರಿ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತದೆ.<br><br>" ರಾಜ್ಯದಲ್ಲಿ ಮದ್ಯವನ್ನು ಮಾರುವುದಕ್ಕೆ ಅಬಕಾರಿ ಇಲಾಖೆ ಸಿಎಲ್-2, ಸಿಎಲ್ -7 ಮತ್ತು ಸಿಎಲ್ -9 ಪರವಾನಗಿ ಕೊಡುತ್ತಿದ್ದು, 1991 ನೇ ಸಾಲಿನಿಂದಲೂ ಕೂಡ ಮೀಸಲಾತಿಯನ್ನು ಪಾಲಿಸಿರುವುದಿಲ್ಲ. 2011 ರ ಜನಗಣತಿಯ ಪ್ರಕಾರ ಅನುಸೂಚಿತ ಜಾತಿ |

| | | |
|---|---|---|
| | | ಮತ್ತು ಅನುಸೂಚಿತ ಪಂಗಡಗಳ ಜಂನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ನಿಯಮಗಳನ್ನು ಪಾಲನೆ ಮಾಡಿ ಸಿಎಲ್-2, ಸಿಎಲ್ -7 ಮತ್ತು ಸಿಎಲ್-9 ಪರವಾನಗಿಗಳನ್ನು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದವರಿಗೆ ನೀಡಬೇಕೆಂದು ಶಿಫಾರಸ್ಸು ಮಾಡಿದೆ".<br><br>ಅದರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಎಫ್‌ಡಿ/14/ಪಿಇಎಸ್/ 2013 ದಿನಾಂಕ: 09-06-2014 ಕ್ಕೆ ತಿದ್ದುಪಡಿ ತಂದು ಸಿಎಲ್-7 ಡಿ ಸನ್ನದು (Hotel and Boarding House Licences owned by the person belonging to Scheduled Castes and Scheduled Tribes) ನೀಡಲು ಅವಕಾಶ ಕಲ್ಪಿಸಲಾಗಿತ್ತು.<br><br>ಸದರಿ ತಿದ್ದುಪಡಿ ಅಧಿಸೂಚನೆಯ ವಿರುದ್ಧ ಶ್ರೀ ಗೋವಿಂದರಾಜ ಹೆಗ್ಡೆ ಇವರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿದ್ದ ರಿಟ್ ಪಿಟಿಷನ್ ಸಂಖ್ಯೆ: 19788/2015 ರಲ್ಲಿ ಸದರಿ ಅಧಿಸೂಚನೆಯಲ್ಲಿನ ತಿದ್ದುಪಡಿಯನ್ನು ಅಸಂವಿಧಾನಿಕ ಎಂದು ರದ್ದುಗೊಳಿಸಿ ದಿನಾಂಕ: 22-07-2016 ರಂದು ತೀರ್ಪು ನೀಡಿರುತ್ತದೆ. ಸದರಿ ತೀರ್ಪಿನ ವಿರುದ್ಧ ರಾಜ್ಯ ಸರ್ಕಾರವು ಸಲ್ಲಿಸಿದ್ದ ರಿಟ್ ಅಪೀಲು ಸಂಖ್ಯೆ: 3374/2016 ನ್ನು ವಜಾಗೊಳಿಸಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ದಿನಾಂಕ: 20-01-2017 ರಂದು ತೀರ್ಪು ನೀಡಿರುತ್ತದೆ. ಈ ತೀರ್ಪಿನ ವಿರುದ್ಧ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿದ್ದ ಎಸ್‌ಎಲ್‌ಪಿ ಯು (ಡೈರಿ ಸಂ.19752/2017) ದಿನಾಂಕ:11.08.2017 ರ ತೀರ್ಪಿನಲ್ಲಿ |

| | | |
|---|---|---|
| | | ವಜಾಗೊಂಡಿರುತ್ತದೆ.<br><br>ಮಾನ್ಯ ನ್ಯಾಯಾಲಯಗಳ ಮೇಲಿನ ಆದೇಶಗಳ ಹಿನ್ನೆಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವ್ಯಕ್ತಿಗಳಿಗೆ ಸನ್ನದುಗಳ ಮಂಜೂರಾತಿಯಲ್ಲಿ ಮೀಸಲಾತಿ ಕಲ್ಪಿಸುವ ಪ್ರಸ್ತಾವನೆ ಕುರಿತು ಕಾನೂನು ಇಲಾಖೆಯು ಈ ಕೆಳಕಂಡಂತೆ ಅಭಿಪ್ರಾಯ ನೀಡಿರುತ್ತದೆ.<br><br>"Therefore, the proposed amendment to the Provisions of The Karnataka Excise( Sale of Indian and Foreign liquors) Rules, 1968, is not constitutional".<br><br>ಈ ಹಿನ್ನೆಲೆಯಲ್ಲಿ ಸರ್ಕಾರದ ಹಂತದಲ್ಲಿ ನಡೆಸಲಾದ ಚರ್ಚೆಯ ನಂತರ ಪ್ರಸ್ತುತ 1991 ನೇ ಸಾಲಿನಿಂದಲೇ ಸಿಎಲ್-2 ಮತ್ತು ಸಿಎಲ್ -9 ಸನ್ನದುಗಳ ಪರವಾನಗಿ ನೀಡಿಕೆ ಮೇಲೆ ನಿರ್ಬಂಧವಿರುವುದರಿಂದ ಪ್ರಸ್ತುತದಲ್ಲಿ ಯಾವುದೇ ಕ್ರಮದ ಅಗತ್ಯವಿರುವುದಿಲ್ಲವೆಂದು ನಿರ್ಣಯಿಸಿ ಪ್ರಸ್ತಾವನೆಯನ್ನು ಕೈಬಿಡಲಾಗಿರುತ್ತದೆ. |
| ಇ) | ಇದ್ದಲ್ಲಿ, ಈ ವರ್ಗದವರ ಆರ್ಥಿಕ ಸ್ವಾವಲಂಬನೆಗಾಗಿ ಅಬಕಾರಿ ಲೈಸನ್ಸ್‌ನಲ್ಲಿ ಮೀಸಲಾತಿ ಒದಗಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ? | ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

ಆಇ 73 ಇಎಲ್‌ಕ್ಯೂ 2025

(ಆರ್.ಬಿ.ತಿಮ್ಮಾಪುರ)
ಅಬಕಾರಿ ಸಚಿವರು